# ಕರ್ನಾಟಕ ಸರ್ಕಾರದ ನಡವಳಿಗಳು

24

ವಿಷಯ:- ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಸ್ಥಗಿತಗೊಳಿಸುವ ಕುರಿತು.

ಓದಲಾಗಿದೆ:- 1.ಸರ್ಕಾರದ ಆದೇಶ ಸಂಖ್ಯೆ:ಸಕಇ 234 ಬಿಎಂಎಸ್ 2007, ದಿ:21.09.2007.

2.ಸರ್ಕಾರದ ಆದೇಶ ಸಂ.ಸಕಇ 234 ಬಿಎಂಎಸ್ 2011 ದಿನಾಂಕ 21-12-2011

3. 16-1-2013ರಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿಯ ಸಭೆಯ ತೀರ್ಮಾನ.

4) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ ಹಿಂವಕಿ/ಅಮಾಜ-1/ಸಿಆರ್-169/2012-13 ದಿನಾಂಕ:22.01.2013

******

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಅಲೆಮಾರಿ ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ಜಾರಿಗೊಳಿಸುವ ಸಂಬಂಧ ಆದೇಶ ಹೊರಡಿಸಿದ್ದು, ಇದರಲ್ಲಿ ರಾಜ್ಯದ ಪ್ರತಿಷ್ಠಿತ ಶಾಲೆಗಳಲ್ಲಿ ಈ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಸೌಲಭ್ಯ ಕಲ್ಪಿಸುವುದು ಸಹ ಒಂದು ಭಾಗವಾಗಿರುತ್ತದೆ.

ಮೇಲೆ ಓದಲಾದ (2)ರಲ್ಲಿ ಈ ಯೋಜನೆಯಡಿಯಲ್ಲಿ 2012-13ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಹೊಸದಾಗಿ ಪ್ರವೇಶ ಮಾಡುವುದನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪ್ರತಿಷ್ಠಿತ ಶಾಲೆಗಳಿಗೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವುದನ್ನು ನಿಲ್ಲಿಸಲು ಆದೇಶಿಸಿದೆ.

ಆದರೆ ಈ ಬಗ್ಗೆ ಅಲೆಮಾರಿ/ಅರೆಅಲೆಮಾರಿ ಜನಾಂಗದ ಸಂಘಟನೆಗಳು ಸಾಕಷ್ಟು ಪ್ರತಿರೋಧ ಕಾರಣ ದಿನಾಂಕ 26-5-2012ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪ್ರತಿಷ್ಠಿತ ಶಾಲೆಗಳ ಮುಖ್ಯಸ್ಥರ ಸಭೆಯನ್ನು ಕರೆದು, ಸರ್ಕಾರ ನಿಗಧಿಪಡಿಸಿರುವ ಶುಲ್ಕದಲ್ಲಿ ಶೈಕ್ಷಣಿಕ ಹಾಗೂ ಇತರೆ ಸೌಲಭ್ಯವನ್ನು ಒದಗಿಸಲು ಒಪ್ಪಿರುವ ಸಂಸ್ಥೆಗಳಲ್ಲಿ ಹೊಸ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ನೀಡಲು ತೀರ್ಮಾನಿಸಲಾಗಿತ್ತು.

ದಿನಾಂಕ 30-7-2011 ರಂದು ಜರುಗಿದ ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ "6ನೇ ತರಗತಿಯಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುವ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ 2011-12ನೇ ಸಾಲಿನಿಂದ ಯಾವುದೇ ಪ್ರವೇಶ ಪರೀಕ್ಷೆ ಇಲ್ಲದೆ, ಶೇ.10 ರಷ್ಟು ಸ್ಥಾನಗಳನ್ನು ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ತೀರ್ಮಾನಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿ ನಡೆದ ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲೂ ಈ ಯೋಜನೆಯನ್ನು ಸ್ಥಗಿತಗೊಳಿಸಿರುವ ಕಾರಣ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಸಾಕಷ್ಟು ಸಂಖ್ಯೆಯಲ್ಲಿ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಅಟಲ್ ಬಿಹಾರಿ ವಾಜಪೇಯಿ ವಸತಿಶಾಲೆಗಳನ್ನು ತೆರೆಯುತ್ತಿರುವ ಕಾರಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲೂ ಈ ಯೋಜನೆಯನ್ನು ಸ್ಥಗಿತಗೊಳಿಸುವ ಬಗ್ಗೆ ತೀರ್ಮಾನಿಸಲಾಯಿತು.

...2

ಮೇಲೆ ಓದಲಾದ (4) ರಲ್ಲಿ ದಿನಾಂಕ 16-1-2013 ರಂದು ನಡೆದ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ತೀರ್ಮಾನಿಸಿದಂತೆ ಈ ಯೋಜನೆಯನ್ನು 2013-14ನೇ ಸಾಲಿನಿಂದ ಸ್ಥಗಿತಗೊಳಿಸಿ, ಕೇವಲ ನವೀಕರಣ ವಿದ್ಯಾರ್ಥಿಗಳನ್ನು ಮುಂದುವರಿಸಲು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 135 ಬಿಎಂಎಸ್ 2013, ಬೆಂಗಳೂರು**
**ದಿನಾಂಕ: 21-02-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶದ ಈ ಯೋಜನೆಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 2013-14ನೇ ಸಾಲಿನಿಂದ ಸ್ಥಗಿತಗೊಳಿಸಿ, ನವೀಕರಣ ವಿದ್ಯಾರ್ಥಿಗಳನ್ನು ಮುಂದುವರೆಸಲು ಆದೇಶಿಸಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಲ್.ಜಿ. ಮುಳಕೂರ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು
3. ಎಲ್ಲಾ ಜಿಲ್ಲಾಧಿಕಾರಿಗಳು,
4. ಎಲ್ಲಾ ಮುಖ್ಯಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್,
5. ಎಲ್ಲಾ ಜಿಲ್ಲಾ ಅಧಿಕಾರಿಗಳು,ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,

   (3–5: ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
6. ಆಂತರಿಕ ಆರ್ಥಿಕ ಸಲಹೆಗಾರರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿಗಳು.